# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ಸಂಖ್ಯೆ: ತುವಿ: ಡಿಇವಿ–02:2025–26/ 3458 ದಿನಾಂಕ:05.02.2026

## ಸುತ್ತೋಲೆ

ವಿಷಯ: ಕರ್ನಾಟಕ ಸರ್ಕಾರದ 'ದೀಪಿಕಾ' ಯೋಜನೆಯಡಿಯಲ್ಲಿ ಅಜೀಂ ಪ್ರೇಮ್ ಜೀ ವಿದ್ಯಾರ್ಥಿವೇತನ ಮತ್ತು ಪೂರಕ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿನಿಯರ ಮಾಹಿತಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ:1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಪತ್ರ ಸಂಖ್ಯೆ:ಕಾಸಿಇ/29/Azim Prem Sch/2025/ವಿವೇ ಪತ್ರ ದಿನಾಂಕ:22.09.2025

2. ವಿವಿ ಸುತ್ತೋಲೆ ಸಂಖ್ಯೆ: ತುವಿ: ಡಿಇವಿ–02:2025–26/ದಿನಾಂಕ:25.09.2025
3. ಸಂಖ್ಯೆ: ತುವಿ: ಡಿಇವಿ–02:2025–26/ ದಿನಾಂಕ:09.01.2026

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(01)ರ ಪತ್ರದಲ್ಲಿ ಕರ್ನಾಟಕ ಸರ್ಕಾರ 2025–26ನೇ ಸಾಲಿನಿಂದ ಉನ್ನತ ಶಿಕ್ಷಣ ಇಲಾಖೆ ಮತ್ತು ಅಜೀಂ ಪ್ರೇಮ್ ಜೀ ಫೌಂಡೇಷನ್ ಸಹಯೋಗದಲ್ಲಿ "ದೀಪಿಕಾ" ಯೋಜನೆಯಡಿಯಲ್ಲಿ **"ಅಜೀಂ ಪ್ರೇಮ್ ಜೀ ವಿದ್ಯಾರ್ಥಿವೇತನ"** ವನ್ನು ಅನುಷ್ಠಾನಗೊಳಿಸಲು ಉನ್ನತ ಶಿಕ್ಷಣ ಇಲಾಖೆಯು ಅಜೀಂ ಪ್ರೇಮ್ ಜೀ ಫೌಂಡೇಷನ್‌ನೊಂದಿಗೆ ದಿನಾಂಕ:19.09.2025 ರಂದು ಒಡಂಬಡಿಕೆಯನ್ನು ಮಾಡಿಕೊಂಡಿದ್ದು, ಪ್ರಸ್ತುತ 2025–26ನೇ ಸಾಲಿನಲ್ಲಿ ಪ್ರಥಮ ಪದವಿ/ಡಿಪ್ಲೋಮಾ ತರಗತಿಗೆ ದಾಖಲಾಗಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ (ಆಯ್ಕೆಯಾಗುವ) ವಿದ್ಯಾರ್ಥಿನಿಯರಿಗೆ ವಾರ್ಷಿಕ ರೂ.30,000/–ಗಳ ವಿದ್ಯಾರ್ಥಿವೇತನ ಮಂಜೂರಾತಿ ಇದ್ದು, ಸದರಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವಂತೆ ಉಲ್ಲೇಖ(02) ಮತ್ತು (03)ರ ಸುತ್ತೋಲೆಗಳಲ್ಲಿ ತಿಳಿಸಲಾಗಿದೆ. ಮುಂದುವರೆದು ಅಂತಿಮ ದಿನಾಂಕದ ನಂತರ ಒಂದು ವಾರದೊಳಗಾಗಿ ಕಾಲೇಜುವಾರು ವಿದ್ಯಾರ್ಥಿನಿಯರ ಸಂಖ್ಯೆ ಮತ್ತು ಅರ್ಜಿ ಸಲ್ಲಿಸಿದ ಸಂಖ್ಯೆಯ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಕಡ್ಡಾಯವಾಗಿ ಸಲ್ಲಿಸುವಂತೆ ತಿಳಿಸಲಾಗಿದೆ.

ಈ ಸಂಬಂಧ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ ಮುಗಿದಿರುವ ಹಿನ್ನಲೆಯಲ್ಲಿ ಮೇಲ್ಕಂಡ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿನಿಯರ ಮಾಹಿತಿ ಪಟ್ಟಿಯನ್ನು ದೃಢೀಕರಣದೊಂದಿಗೆ ದಿನಾಂಕ:12.02.2026 ರೊಳಗೆ ಕಡ್ಡಾಯವಾಗಿ ಆದ್ಯತೆ ಮೇರೆಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು

~~ಸಹಾಯಕ ಕುಲಸಚಿವರು~~

ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

**ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ/ಸಂಯೋಜಿತ ಕಾಲೇಜುಗಳು, ತುವಿತು.**

ಪ್ರತಿಗಳು:

1. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಎಸ್.ಎಸ್.ಪಿ ನೋಡಲ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಈ ಸಂಬಂಧ ಅಗತ್ಯಕ್ರಮವಹಿಸಲು ತಿಳಿಸಿದೆ.
3. ಸಿಸ್ಟಮ್ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಈ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಇ–ಮೇಲ್ ಮೂಲಕ ಕಳುಹಿಸಲು ಸೂಕ್ತ ಕ್ರಮವಹಿಸುವುದು.
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುವಿತು.
5. ಕಚೇರಿ ಪ್ರತಿ.